# Akashvani : Bangalore
# Regional Bulletin In Kannada
# 23.05.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿ ಶಿಕ್ಷಣ ಕೋರ್ಸ್‌ಗಳ ಪ್ರವೇಶಕ್ಕೆ ಕೆಇಎ ನಡೆಸಿದ್ದ ಸಿಇಟಿ ಫಲಿತಾಂಶ ನಾಳೆ ಪ್ರಕಟ

೨. ರಾಮನಗರಕ್ಕೆ 'ಬೆಂಗಳೂರು ದಕ್ಷಿಣ' ಜಿಲ್ಲೆ ಎಂದು ನಾಮಕರಣ ಮಾಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಿಸಲು ರಾಜ್ಯ ಸರ್ಕಾರ ಬದ್ಧ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೪. ರಾಜ್ಯದ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನೌಷಧ ಕೇಂದ್ರಗಳನ್ನು ಮುಚ್ಚದಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹ

<><*<><>*><>

ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿ ಶಿಕ್ಷಣ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ್ದ ಸಾಮಾನ್ಯ ಪ್ರವೇಶ ಪರೀಕ್ಷೆ-ಸಿಇಟಿ ಫಲಿತಾಂಶ ನಾಳೆ ಪ್ರಕಟವಾಗಲಿದೆ. ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಏಪ್ರಿಲ್ ೧೬ ರಂದು ಭೌತ ಶಾಸ್ತ್ರ ಮತ್ತು ರಸಾಯನ ಶಾಸ್ತ್ರ, ಏಪ್ರಿಲ್ ೧೭ ರಂದು ಗಣಿತ ಮತ್ತು ಜೀವ ಶಾಸ್ತ್ರ ವಿಷಯಗಳ ಪರೀಕ್ಷೆಗಳನ್ನು ೭೭೫ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗಿತ್ತು. ದ್ವಿತೀಯ ಪಿಯು ಪರೀಕ್ಷೆ-೧ ಮತ್ತು ಪರೀಕ್ಷೆ-೨, ಸಿಬಿಎಸ್‌ಇ, ಐಸಿಎಸ್‌ಇ ಫಲಿತಾಂಶ ಪ್ರಕಟವಾಗಿದ್ದು, ಅಭ್ಯರ್ಥಿಗಳು ಪಡೆದ ಅಂಕಗಳ ಕೂಡುವಿಕೆ ಕಾರ್ಯವನ್ನು ಕೆಇಎ ಪೂರ್ಣಗೊಳಿಸಿದೆ.

<><*<><>*><>

ಕೇಂದ್ರ ವಿದ್ಯುತ್ ಸಚಿವ ಮನೋಹರ್ ಲಾಲ್ ಬೆಂಗಳೂರಿನಲ್ಲಿ ಇಂದು ರಾಜ್ಯದ ವಿದ್ಯುತ್ ಕ್ಷೇತ್ರದ ಸಮಗ್ರ ಪರಿಶೀಲನೆ ನಡೆಸಿದರು. ಸಭೆಯಲ್ಲಿ, ಉತ್ಪಾದನಾ ಮಿಶ್ರಣ, ಪ್ರಸರಣ ಮೂಲಸೌಕರ್ಯಕ್ಕಾಗಿ ರೈಟ್ ಆಫ್ ವೇ ನಲ್ಲಿನ ಸವಾಲುಗಳು ಮತ್ತು ವಿತರಣಾ ಮೂಲಸೌಕರ್ಯವನ್ನು ಸುಧಾರಿಸುವಲ್ಲಿ ಬೆಂಬಲದ ಅಗತ್ಯತೆಯಂತಹ ಸಮಸ್ಯೆಗಳನ್ನು ಚರ್ಚಿಸಲಾಯಿತು. ಈ ಸಭೆಯು ತಳಮಟ್ಟದ ಸಮಸ್ಯೆಗಳನ್ನು ಚೆನ್ನಾಗಿ ಅರ್ಥಮಾಡಿಕೊಳ್ಳುವುದು ಮತ್ತು ರಾಜ್ಯದಲ್ಲಿ ವಿದ್ಯುತ್ ಸರಬರಾಜನ್ನು ಬಲಪಡಿಸಲು ಹೊಸ ಉಪಕ್ರಮಗಳನ್ನು ಅನ್ವೇಷಿಸುವ ಗುರಿಯನ್ನು ಹೊಂದಿದೆ ಎಂದು ಸಚಿವ ಮನೋಹರ್ ಲಾಲ್ ಒತ್ತಿ ಹೇಳಿದರು. ರಾಜ್ಯವು ತನ್ನ ವಿದ್ಯುತ್ ಸೌಲಭ್ಯಗಳ ವಾರ್ಷಿಕ ಆರ್ಥಿಕ ನಷ್ಟವನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳುವಂತೆ ಮತ್ತು ವೆಚ್ಚ-ಪರಿಣಾಮಕಾರಿ ಸುಂಕಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಸಚಿವರು ಒತ್ತಾಯಿಸಿದರು. ಸಭೆಯಲ್ಲಿ ಕೇಂದ್ರ ವಿದ್ಯುತ್ ಮತ್ತು ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ ನಾಯಕ್, ರಾಜ್ಯ ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

<><*<><>*><>

ರಾಮನಗರಕ್ಕೆ 'ಬೆಂಗಳೂರು ದಕ್ಷಿಣ' ಜಿಲ್ಲೆ ಎಂದು ಮರುನಾಮಕರಣ ಮಾಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮೈಸೂರಿನಲ್ಲಿ ಇಂದು ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ರಾಮನಗರ ಜನರ ಅಭಿಪ್ರಾಯ ಪಡೆದ ನಂತರೇ ಈ ನಿರ್ಣಯವನ್ನು ಕೈಗೊಳ್ಳಲಾಗಿದೆ ಎಂದರು. ಗೃಹ ಸಚಿವ ಜಿ.ಪರಮೇಶ್ವರ ಅವರ ಶಿಕ್ಷಣ ಸಂಸ್ಥೆಗಳ ಮೇಲೆ ಇ.ಡಿ. ದಾಳಿ ರಾಜಕೀಯ ಪ್ರೇರಿತ ಎಂದು ಆರೋಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಇ.ಡಿ., ಐ.ಟಿ.ಯವರು ತನಿಖೆ ಮಾಡಲು ಅಥವಾ ಕಪ್ಪು ಹಣ ವ್ಯವಹಾರ ಪತ್ತೆ ಹಚ್ಚುವುದನ್ನು ನಾವು ಆಕ್ಷೇಪಿಸುವುದಿಲ್ಲ. ಆದರೆ ಇ.ಡಿ ಮತ್ತು ಐ.ಟಿ ದಾಳಿಗಳು ರಾಜಕೀಯ ದುರುದ್ದೇಶದಿಂದ ನಡೆಯಬಾರದು ಎಂದು ಹೇಳಿದರು.

<><*<><>*><>

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನರೇ ಮಾಲೀಕರು. ಕ್ಷೇತ್ರಗಳ ಅಭಿವೃದ್ಧಿ, ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವುದು ಸರ್ಕಾರದ ಹಾಗೂ ಶಾಸಕರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮೈಸೂರು ಜಿಲ್ಲೆಯ ಕೆ.ಆರ್. ನಗರ ವಿಧಾನಸಭಾ ವ್ಯಾಪ್ತಿಯಲ್ಲಿ ಇಂದು ಒಟ್ಟು ೫೧೩ ಕೋಟಿ ರೂಪಾಯಿಗಳ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

<><*<><>*><>

ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯವನ್ನು ೫೧೯.೬೦ ಮೀಟರ್‌ನಿಂದ ೫೨೪.೨೫೬ ಮೀಟರ್ ಎತ್ತರಕ್ಕೆ ಏರಿಸುವ ಕಾರ್ಯಕ್ಕೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು. ವಿಜಯಪುರ ಜಿಲ್ಲೆಯ ಕೋಲಾರ ಪಟ್ಟಣದಲ್ಲಿ ಭೂಮಿ ಪೂಜೆ ಹಾಗೂ ನೂತನ ಕಟ್ಟಡಗಳ ಲೋಕಾರ್ಪಣೆ ಕಾರ್ಯಕ್ರಮ ನೆರವೇರಿಸಿ ಮಾತನಾಡಿದ ಅವರು, ಇದಕ್ಕಾಗಿ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲಾಗಿದೆ. ಆಲಮಟ್ಟಿ ಜಲಾಶಯವನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸಬೇಕೆಂದು ಸರ್ಕಾರದ ಆಶಯ ಎಂದರು. ಕೃಷ್ಣ ಕೊಳ್ಳದ ಎಲ್ಲಾ ಯೋಜನೆಗಳನ್ನು ಪೂರ್ಣಗೊಳಿಸುವ ಕಾರ್ಯಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

<><*<><>*><>

ಜೇನು ಕೃಷಿ ಲಾಭದಾಯಕವಾಗಿದ್ದು, ರೈತರು ಈ ಕೃಷಿಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ರೈತರಿಗೆ ಸಲಹೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿಂದು ಜೇನು ವ್ಯವಸಾಯಗಾರರ ಸಹಕಾರಿ ಸಂಘದ ನೂತನ ಕಟ್ಟಡ ಉದ್ಘಾಟನೆ ಹಾಗೂ ಜೇನು ಚಾಕಲೇಟ್ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜೇನಿನಿಂದಲೇ ಚಾಕಲೇಟ್ ಸಿದ್ಧಗೊಂಡು ಮಾರುಕಟ್ಟೆಗೆ ಬಿಡುಗಡೆಗೊಳ್ಳುತ್ತಿರುವುದು ಉತ್ತಮ ಬೆಳವಣಿಗೆ. ಇಂತಹ ಹೊಸ ಹೊಸ ಪ್ರಯೋಗಗಳು ನಡೆಯುತ್ತಿರಬೇಕು ಎಂದರು. ಔಷಧೀಯ ಗುಣವುಳ್ಳ ಜೇನು ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಇದೆ ಎಂದು ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

<><*<><>*><>

ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿನ ಜನೌಷಧ ಕೇಂದ್ರಗಳನ್ನು ಮುಚ್ಚುವ ಕುರಿತ ಆದೇಶವನ್ನು ರಾಜ್ಯ ಸರ್ಕಾರ ಮರುಪರಿಶೀಲಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿಂದು ಮಾತನಾಡಿದ ಅವರು, ಜನೌಷಧ ಕೇಂದ್ರಗಳು ಜನಸಾಮಾನ್ಯರ ಜೀವನಾಡಿಯಾಗಿದೆ. ಇದನ್ನು ಮುಚ್ಚುವ ನಿರ್ಧಾರವೇ ಭಯಾನಕವಾದುದು. ಇದರ ಹಿಂದೆ ದೊಡ್ಡ ಮಾಫಿಯಾ ಇದೆ. ಜನಸಾಮಾನ್ಯರಿಗೆ ತೊಂದರೆಯಾಗುವ ಯಾವುದೇ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಳ್ಳಬಾರದು ಎಂದರು. ರಾಮನಗರ ಹೆಸರು ಬದಲಾಯಿಸುವ ನಿರ್ಧಾರದ ಹಿಂದೆ ದೊಡ್ಡ ಷಡ್ಯಂತ್ರ ಇದೆ. ಲ್ಯಾಂಡ್ ಮಾಫಿಯಾಗಳಿಂದ ಈ ಕೆಲಸ ಆಗುತ್ತಿದೆ. ರಾಮನಗರ ಬದಲು ಬೆಂಗಳೂರು ಎಂದಾದರೆ ಅಲ್ಲಿನ ಜಾಗಕ್ಕೆ ಹೆಚ್ಚಿನ ಮೌಲ್ಯ ಬರುವ ಸಾಧ್ಯತೆ ಇರುವುದರಿಂದ, ದೊಡ್ಡ ದೊಡ್ಡ ಕುಳಗಳು ಈ ಷಡ್ಯಂತ್ರ ರೂಪಿಸಿವೆ ಎಂದು ಆರೋಪಿಸಿದ ಅವರು, ರಾಮನಗರ ಹೆಸರು ಸದಾ ಕಾಲ ಉಳಿಯಬೇಕು. ಯಾವುದೇ ಕಾರಣಕ್ಕೂ ಬದಲಾವಣೆ ಸಲ್ಲದು ಎಂದು ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದರು.

<><*<><>*><>

ಭಯೋತ್ಪಾದಕರಿಗೆ ಕುಮ್ಮಕ್ಕು ನೀಡಿ ಭಾರತದಲ್ಲಿ ದುಷ್ಕೃತ್ಯ ಎಸಗುತ್ತಿದ್ದ ಪಾಕಿಸ್ತಾನಕ್ಕೆ, ಭಾರತೀಯ ಸೈನ್ಯವು ಆಪರೇಷನ್ ಸಿಂದೂರದ ಮೂಲಕ ಸರಿಯಾದ ಪಾಠ ಕಲಿಸಿದೆ ಎಂದು ಮೈಸೂರು-ಕೊಡಗು ಕ್ಷೇತ್ರದ ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ. ಮಡಿಕೇರಿಯಲ್ಲಿ ಆಯೋಜಿಸಿದ್ದ ಆಪರೇಷನ್ ಸಿಂದೂರ್ ವಿಜಯೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಮರ್ಥವಾಗಿ ಗಡಿ ಕಾಯುವ ಸೇನಾಪಡೆಗಳಿಂದ ನಾವು ಇಂದು ನೆಮ್ಮದಿಯಿಂದ ಇದ್ದೇವೆ. ಯೋಧರನ್ನು ಗೌರವಿಸುವುದು ಮತ್ತು ಬೆಂಬಲಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

<><*<><>*><>

ಮೈಸೂರಿನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಮಾವು-ಹಲಸು ಮೇಳ ಪ್ರಾರಂಭಗೊಂಡಿದೆ. ತೋಟಗಾರಿಕೆ ಇಲಾಖೆ ವತಿಯಿಂದ ಮೈಸೂರಿನ ಕುಪ್ಪಣ್ಣ ಪಾರ್ಕ್‌ನಲ್ಲಿ ಆಯೋಜಿಸಿರುವ ಮಾವು-ಹಲಸು

ಮೇಳಕ್ಕೆ ಶಾಸಕ ಕೆ.ಹರೀಶ್ ಗೌಡ ಇಂದು ಚಾಲನೆ ನೀಡಿದರು. ಇಲ್ಲಿ ಒಟ್ಟು ೪೯ ಮಳಿಗೆಗಳನ್ನು ತೆರೆಯಲಾಗಿದೆ. ಈ ಮಳಿಗೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಮಾವು ಬೆಳೆದಿರುವ ರೈತರು, ಮಾವು-ಹಲಸಿನ ಹಣ್ಣುಗಳನ್ನು ಮಾರಾಟ ಮಾಡುತ್ತಿದ್ದಾರೆ. ಮೈಸೂರು, ಮಂಡ್ಯ, ಚಾಮರಾಜನಗರ, ರಾಮನಗರ, ಧಾರವಾಡ ಜಿಲ್ಲೆಗಳ ರೈತರು ಮೇಳದಲ್ಲಿ ಭಾಗವಹಿಸಿದ್ದಾರೆ. ಮೇಳದಲ್ಲಿ ರಸಪೂರಿ, ಮಲ್ಲಿಕಾ, ಮಲ್ಗೋವಾ, ಬಾದಾಮಿ ಸೇರಿದಂತೆ ಹತ್ತಾರು ಬಗೆಯ ಮಾವುಗಳು ಲಭ್ಯವಿದೆ.

<><*<><>*><>

ಪ್ರಸಕ್ತ ಸಾಲಿನ ಮುಂಗಾರು ಅವಧಿಯಲ್ಲಿ ಯಾವುದೇ ಜೀವ ಹಾನಿ ಆಗದಂತೆ ಅಗತ್ಯವಿರುವ ಎಲ್ಲಾ ಗರಿಷ್ಠ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.  ಪ್ರಸಕ್ತ ಸಾಲಿನ ಮುಂಗಾರು ಪೂರ್ವ ಸಿದ್ಧತೆ ಕುರಿತು ಕೈಗೊಂಡಿರುವ ಕ್ರಮಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ರೀತಿಯ ವಿಪತ್ತುಗಳನ್ನು ಸಮರ್ಥವಾಗಿ ಎದುರಿಸುವ ಮೂಲಕ ಜಿಲ್ಲೆಯ ಸಾರ್ವಜನಿಕರ ರಕ್ಷಣೆಗೆ ಆದ್ಯತೆ ನೀಡುವಂತೆ ನಿರ್ದೇಶಿಸಿದರು.  ಜಿಲ್ಲೆಯಲ್ಲಿನ ಶಾಲೆಗಳು ಮತ್ತು ಅಂಗನವಾಡಿ ಕಟ್ಟಡಗಳ ಬಳಿ ಇರುವ ಅಪಾಯಕಾರಿ ಮರಗಳನ್ನು ತಕ್ಷಣ ತೆರವುಗೊಳಿಸಬೇಕು. ಈ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದರೆ, ಪರ್ಯಾಯ ಸುರಕ್ಷಾ ಕ್ರಮಗಳನ್ನು ಕೈಗೊಳ್ಳಬೇಕು. ಅರಣ್ಯ ಇಲಾಖೆ ವತಿಯಿಂದ ಅಪಾಯಕಾರಿ ಮರಗಳನ್ನು ತಕ್ಷಣವೇ ತೆರವುಗೊಳಿಸುವ ಕಾರ್ಯ ಮಾಡಬೇಕು. ಮಳೆಯಿಂದ ಹಾನಿ ಸಂಭವಿಸಿದ್ದಲ್ಲಿ ಸಂಬಂಧಪಟ್ಟವರಿಗೆ ತಕ್ಷಣವೇ ಪರಿಹಾರ ವಿತರಿಸಬೇಕು ಎಂದು ಸಚಿವ ಮಂಕಾಳ ವೈದ್ಯ ಸೂಚಿಸಿದರು.

<><*<><>*><>

ಮಳೆಗಾಲ ಪೂರ್ವ ನಾಲಾ ಸ್ವಚ್ಛತೆ ಕುರಿತು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕೈಗೊಂಡಿರುವ ಮುಂಜಾಗ್ರತಾ ಕಾರ್ಯಗಳನ್ನು ಮೇಯರ್ ರಾಮಪ್ಪ ಬಡಿಗೇರ  ಪರಿಶೀಲಿಸಿದರು.  ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ನಾಲಾ ಹೂಳೆತ್ತುವ ಕೆಲಸಕ್ಕೆ ೨ ಕೋಟಿ ರೂಪಾಯಿ ವ್ಯಯಿಸಲಾಗುತ್ತಿದೆ. ಇದರ ಹೊರತಾಗಿಯೂ ಆಯಾ ವಾರ್ಡ್ ನಿಧಿಯಲ್ಲಿ ಸದಸ್ಯರು ತಮ್ಮ ವಿವೇಚನೆಯಡಿ ಕೆಲಸ ಮಾಡಿಸಬಹುದಾಗಿದೆ ಎಂದರು. ಕಮರಿಪೇಟೆದಲ್ಲಿ ನಾಲಾ ಮೇಲೆ ಪೊಲೀಸ್ ಠಾಣೆ ಕಟ್ಟಡ ಇರುವುದರಿಂದ, ಹೂಳೆತ್ತುವ ಕೆಲಸಕ್ಕೆ ಅಡ್ಡಿಯಾಗಿದೆ. ಪೊಲೀಸರು ಪರ್ಯಾಯ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಪೊಲೀಸ್ ಠಾಣೆ ಸ್ಥಳಾಂತರಿಸಿದ ಬಳಿಕೆ ನಾಲಾ ಹೂಳೆತ್ತಲು ತ್ವರಿತವಾಗಿ ಕ್ರಮ ಜರುಗಿಸಲಾಗುವುದು ಎಂದು ಮೇಯರ್ ರಾಮಪ್ಪ ಬಡಿಗೇರ ತಿಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ  <>*><>**